All India Radio: Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

13.05.2026 2.30 p.m.

<><><><>

ಮುಖ್ಯಾಂಶಗಳು

- ಬೆಂಗಳೂರಿನಲ್ಲಿ ಬಿ ಖಾತೆಯಿಂದ ಎ ಖಾತೆ ಮಾಡಿಸಿಕೊಳ್ಳಲು ೧೦೦ ದಿನಗಳ ಕಾಲ ಅವಕಾಶ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಘೋಷಣೆ
- ಧಾರವಾಡ ಪ್ರತ್ಯೇಕ ಪಾಲಿಕೆ ರಚನೆಗೆ ಸರ್ಕಾರ ಸಂಪೂರ್ಣ ಬೆಂಬಲ - ಸಚಿವ ಸಂತೋಷ್ ಲಾಡ್ ಸ್ಪಷ್ಟನೆ
- ಮಲೆ ಮಹದೇಶ್ವರ ಬೆಟ್ಟದಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳಿಂದ ಮುಂದುವರಿದ ಚಿರತೆ ಶೋಧ ಕಾರ್ಯ
- ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿತ ; ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪ
- ರಾಜ್ಯದ ಹಲವೆಡೆ ಮುಂದಿನ ಒಂದು ವಾರ ಮಳೆ ; ೨೦ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಿದ ಹವಾಮಾನ ಇಲಾಖೆ

<><><><>

ಬೆಂಗಳೂರಿನಲ್ಲಿ ಬಿ ಖಾತೆಯಿಂದ ಎ ಖಾತೆ ಮಾಡಿಸಿಕೊಳ್ಳಲು ೧೦೦ ದಿನಗಳ ಕಾಲಾವಕಾಶ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಂದರ್ಭದಲ್ಲಿ ಶೇಕಡ ೫ ರಿಂದ ಶೇಕಡ ೨ಕ್ಕೆ ಮಾರ್ಗದರ್ಶಿ ದರ, ಇಳಿಕೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಇದರಿಂದ ೭ ಲಕ್ಷ ಬಿ ಖಾತಾದಾರರಿಗೆ ಅನುಕೂಲವಾಗಲಿದೆ. ಈ ಮೂಲಕ ಬೆಂಗಳೂರಿನ ಅಭಿವೃದ್ಧಿಗೆ ೬ನೇ ಭೂ-ಗ್ಯಾರಂಟಿ ನೀಡಲಾಗುವುದು ಎಂದು ತಿಳಿಸಿದ್ದಾರೆ. ೧೦೦ ದಿನಗಳಲ್ಲಿ ಖಾತೆ ಬದಲಾವಣೆ ಮಾಡದಿದ್ದರೆ ಶೇಕಡ ೫ರಷ್ಟು ಗೈಡೆನ್ಸ್ ವ್ಯಾಲ್ಯು ಇರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಮೇ ೧೭ರಿಂದ ನೂತನ ಮಾರ್ಗಸೂಚಿ ಆರಂಭವಾಗಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

<><><><>

ಧಾರವಾಡ ಪ್ರತ್ಯೇಕ ಪಾಲಿಕೆ ರಚನೆಗೆ ನಮ್ಮ ಸಂಪೂರ್ಣ ಬೆಂಬಲವಿದ್ದು, ಈ ಕಡತಕ್ಕೆ ರಾಜ್ಯಪಾಲರ ಅಂಕಿತ ಹಾಕಿಸುವ ನಿಟ್ಟಿನಲ್ಲಿ ಸರಕಾರ ಕಾರ್ಯೋನ್ಮುಖವಾಗಲಿದೆ ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ. ಧಾರವಾಡದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತ್ಯೇಕ ಪಾಲಿಕೆ ರಚನೆಗೆ ನಮ್ಮ ಸರಕಾರ ಬದ್ಧವಾಗಿದೆ. ಕಾನೂನು ಸಚಿವ ಎಚ್.ಕೆ. ಪಾಟೀಲ್ ಅವರ ನೇತೃತ್ವದಲ್ಲಿ ರಾಜ್ಯಪಾಲರ ಭೇಟಿಗೆ ಸಮಯ ಕೇಳಲಾಗುವುದು. ಒಂದು ವೇಳೆ ಈ ಪ್ರಸ್ತಾವನೆಗೆ ಸಹಿ ಹಾಕಲು ರಾಜ್ಯಪಾಲರು ನಿರಾಕರಿಸಿದರೆ ಹೋರಾಟ ನಡೆಸಲಾಗುವುದು ಎಂದು ಹೇಳಿದ್ದಾರೆ. ಈಗಾಗಲೇ ರಾಜ್ಯಪಾಲರ ಬಳಿ ಇರುವ ಪ್ರಸ್ತಾವನೆಗೆ ಒಪ್ಪಿಗೆ ಪಡೆಯುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಚಾಮರಾಜನಗರ ಜಿಲ್ಲೆ ಹನೂರು ತಾಲೂಕಿನ ಮಲೆಮಹದೇಶ್ವರ ಬೆಟ್ಟದಲ್ಲಿನ ಇಂಡಿಗನತ್ತದಲ್ಲಿ ಚಿರತೆ ದಾಳಿಯಲ್ಲಿ ಬಾಲಕ ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅರಣ್ಯ ಇಲಾಖೆಯು ನಿರಂತರ ಕಾರ್ಯಾಚರಣೆ ನಡೆಸುತ್ತಿದೆ.

ಚಿರತೆ ಸೆರೆ ಕಾರ್ಯಪಡೆ ಸೇರಿದಂತೆ ೭೦ಕ್ಕೂ ಹೆಚ್ಚು ಸಿಬ್ಬಂದಿಯಿಂದ ಶೋಧಕಾರ್ಯ ಮುಂದುವರೆದಿದೆ. ಡ್ರೋಣ್ ಹಾಗೂ ಥರ್ಮಲ್ ಡ್ರೋಣ್ ಮೂಲಕ ಚಿರತೆ ಹುಡುಕಾಟ ಮುಂದುವರೆದಿದ್ದು ಕ್ಯಾಮರಾ ಟ್ರಾಪ್ ನಲ್ಲಿ ಚಿರತೆ ಓಡಾಟದ ದೃಶ್ಯ ಸೆರೆಯಾಗಿದೆ. ಬೆಳಗಿನ ಜಾವ ಕ್ಯಾಮರಾ ಟ್ರಾಪ್ ನಲ್ಲಿ ಚಿರತೆ ದೃಶ್ಯ ಸೆರೆಯಾಗಿದ್ದು, ಸದ್ಯ ಚಿರತೆ ಅರಣ್ಯ ಇಲಾಖೆ ಪ್ರಯತ್ನ ಮುಂದುವರಿಸಿದೆ. ವಿವಿಧ ಮಾದರಿಯ ಬೋನುಗಳನ್ನು ಆಯಕಟ್ಟಿನ ಸ್ಥಳದಲ್ಲಿ ಇರಿಸಲಾಗಿದ್ದು ಕಾರ್ಯಚರಣೆ ಮುಂದುವರೆದಿದೆ.

<><><>

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೊಲೀಸ್ ಇಲಾಖೆ ಶಿಸ್ತು, ನೈತಿಕತೆ ಮತ್ತು ಸಾರ್ವಜನಿಕ ನಂಬಿಕೆಯನ್ನು ಕಳೆದುಕೊಂಡಿದೆ ಎಂದು ದೂರಿದ್ದಾರೆ. ಪೊಲೀಸ್ ಇಲಾಖೆ ಕುರಿತಂತೆ ಮಾಧ್ಯಮಗಳಲ್ಲಿ ವರದಿಯಾಗಿರುವ ಅಂಕಿ-ಅಂಶಗಳು ರಾಜ್ಯದ ಕಾನೂನು ಸುವ್ಯವಸ್ಥೆಯ ಬಗ್ಗೆ ಪ್ರಶ್ನಿಸುವಂತಿದೆ ಎಂದು ತಿಳಿಸಿದ್ದಾರೆ. ಕೇವಲ ಎರಡು ವರ್ಷಗಳಲ್ಲಿ ೭೧೩ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿರುವುದು ರಾಜ್ಯದ ಸಂಪೂರ್ಣ ಆಡಳಿತ ವ್ಯವಸ್ಥೆ ಕುಸಿದು ಬಿದ್ದಿದೆ ಎಂಬುದಕ್ಕೆ ಸಾಕ್ಷಿ ಎಂದು ಹೇಳಿದ್ದಾರೆ. ರಾಜ್ಯ ಸರ್ಕಾರ ಅಪರಾಧಿಗಳನ್ನು ನಿಯಂತ್ರಿಸುತ್ತಿದೆಯೇ ಅಥವಾ ಅಪರಾಧಿಗಳಿಗೆ ರಾಜಕೀಯ ರಕ್ಷಣೆ ನೀಡುತ್ತಿದೆಯೇ ಎಂದು ಪ್ರಶ್ನಿಸಿದ್ದಾರೆ.

<><><>

ಕೇಂದ್ರೀಯ ಪ್ರೌಢಶಿಕ್ಷಣ ಮಂಡಳಿ ಇಂದು ೧೨ನೇ ತರಗತಿಯ ಫಲಿತಾಂಶಗಳನ್ನು ಪ್ರಕಟಿಸಿದೆ. ವಿದ್ಯಾರ್ಥಿಗಳು ತಮ್ಮ ಫಲಿತಾಂಶವನ್ನು ಅಧಿಕೃತ ವೆಬ್‌ಸೈಟ್ ಡಿಜಿಲಾಕರ್ ಮತ್ತು ಉಮಂಗ್ ಅಪ್ಲಿಕೇಷನ್‌ನಲ್ಲಿ ನೋಂದಣಿ ಸಂಖ್ಯೆಯನು ನಮೂದಿಸುವ ಮೂಲಕ ಪರಿಶೀಲಿಸಬಹುದು. ಸಿಬಿಎಸ್‌ಇ ೧೨ನೇ ತರಗತಿಯ ಪರೀಕ್ಷೆಗಳನ್ನು ಫೆಬ್ರವರಿ ೧೭ ರಿಂದ ಏಪ್ರಿಲ್ ೧೦ರ ನಡುವೆ ನಡೆಸಿತ್ತು.

<><><>

ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ ಖಂಡಿಸಿ ಶಿವಮೊಗ್ಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಇಂದು ಪ್ರತಿಭಟನೆ ನಡೆಸಿತು. ವಿನೋಬನಗರದಲ್ಲಿರುವ ಸಂಸದ ಬಿ.ವೈ.ರಾಘವೇಂದ್ರ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಪ್ರತಿಭಟನಾಕಾರರು ಯತ್ನಿಸಿದ ವೇಳೆ ಪೊಲೀಸರು ಪ್ರತಿಭಟನಾಕಾರರನ್ನು ತಡೆದಿದ್ದಾರೆ. ನಂತರ ಯುವ ಕಾಂಗ್ರೆಸ್ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಮೇ ೩ರಂದು ನಡೆದ ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ. ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಕಾಪಾಡುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಯುವ ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

<><><>

ಕನ್ನಡ ಚಿತ್ರರಂಗದ ನಟ ಹಾಗೂ ಧಾರವಾಹಿ ನಿರ್ಮಾಪಕ ದಿಲೀಪ್ ರಾಜ್ ಇಂದು ಮುಂಜಾನೆ ಹೃದಯಾಘಾತದಿಂದ ಬೆಂಗಳೂರಿನಲ್ಲಿ ನಿಧನರಾಗಿದ್ದಾರೆ. ಕೂಡಲೇ ಕುಟುಂಬಸ್ಥರು ಅವರನ್ನು ಆಸ್ಪತ್ರೆಗೆ ದಾಖಲಿಸಿದ್ದರೂ ಚಿಕಿತ್ಸೆಗೆ ಸ್ಪಂದಿಸದೇ ಆಸ್ಪತ್ರೆಯಲ್ಲೇ ಕೊನೆಯುಸಿರೆಳೆದಿದ್ದಾರೆ. ಹಿರಿಯ ನಟರಾದ ರಿಷಬ್‌ಶೆಟ್ಟಿ, ಗಣೇಶ್ ಸೇರಿದಂತೆ ಚಿತ್ರರಂಗದ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ನಟ ದಿಲೀಪ್ ರಾಜ್ ಅವರ ನಿಧನಕ್ಕೆ ದುಃಖ ವ್ಯಕ್ತಪಡಿಸಿದ್ದಾರೆ. ನಿಧನದ ಸುದ್ದಿ ಕೇಳಿ ತೀವ್ರ ಅಘಾತವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಸುಗ್ರೀವ, ಬಾಯ್ ಫ್ರೆಂಡ್, ಮಿಲನ, ಯೂಟರ್ನ್ ಸೇರಿದಂತೆ ಸುಮಾರು ೨೮ ಚಿತ್ರಗಳಲ್ಲಿ ದಿಲೀಪ್ ರಾಜ್ ನಟಿಸಿದ್ದಾರೆ. ಅಲ್ಲದೇ ಹಲವು ಧಾರವಾಹಿಗಳ ಮೂಲಕವೂ ಅವರು ಮನೆ ಮಾತಾಗಿದ್ದರು.

<><><>

ಬಮೂಲ್ ಕಲ್ಯಾಣ ಟ್ರಸ್ಟ್ ವತಿಯಿಂದ ಹಾಲು ಉತ್ಪಾದಕರ ಕಲ್ಯಾಣಕ್ಕೆ ಹಾಗೂ ಸದಸ್ಯರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕಾಗಿ ವಾರ್ಷಿಕ ೨೦ ಕೋಟಿ ರೂಪಾಯಿಗಳನ್ನು ವಿನಿಯೋಗಿಸಲಾಗುತ್ತಿದೆ. ಬಮೂಲ್‌ನಲ್ಲಿ ಸಂಗ್ರಹವಾಗಿರುವ ೭೦ ಕೋಟಿ ರೂಪಾಯಿ ಹಣವನ್ನು ರೈತರಿಗೆ ೧ ರೂಪಾಯಿ ಪ್ರೋತ್ಸಾಹಧನದ ಮೂಲಕ ವಿತರಿಸಲಾಗಿದೆ ಎಂದು ಬೆಂಗಳೂರು ಸಹಕಾರ ಹಾಲು ಒಕ್ಕೂಟದ ಅಧ್ಯಕ್ಷ ಡಿ.ಕೆ.ಸುರೇಶ್ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಬೆಂಗಳೂರು ಹಾಲು ಒಕ್ಕೂಟದ ವತಿಯಿಂದ ನಡೆದ ಪ್ರತಿಭಾ ಪುರಸ್ಕಾರ ಚೆಕ್ ವಿತರಣೆ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೈನುಗಾರಿಕೆಯಲ್ಲಿ ಹೆಣ್ಣು ಕರುಗಳಿದ್ದರೆ ರೈತರಿಗೆ ಆದಾಯ ಹೆಚ್ಚಾಗಲಿದ್ದು, ಹೆಣ್ಣು ಕರುಗಳ ಜನನವಾಗುವಂತೆ ಯೋಜನೆ ರೂಪಿಸಿದೆ. ಇದರಿಂದ ರೈತರು ಹೆಚ್ಚಿನ ಹಸುಗಳನ್ನು ಸಾಕಬಹುದಾಗಿದ್ದು, ಆದಾಯ ವೃದ್ಧಿಯಾಗಲಿದೆ ಎಂದು ಹೇಳಿದ್ದಾರೆ. ಈಗ ಬಮೂಲ್ ನೇತೃತ್ವದಲ್ಲಯೇ ವಿಮಾ ಪಾಲಿಸಿ ಪ್ರಕ್ರಿಯೆಗಳನ್ನು ನಡೆಸಲಾಗುತ್ತಿದೆ. ಎಐ ತಂತ್ರಜ್ಞಾನದ ಮೂಲಕ ಹಸುಗಳ ಮೂಗುಗಳ ಬಯೋಮೆಟ್ರಿಕ್, ಫೋಟೋಗಳನ್ನು ಪಡೆದು ೧೫ ದಿನಗಳೊಳಗೆ ವಿಮೆ ಹಣ ನೀಡಲಾಗುತ್ತಿದೆ. ಸುಮಾರು ೧ ಲಕ್ಷ ೨೦ ಸಾವಿರ ಹಸುಗಳಿಗೆ ವಿಮೆ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ದಾವಣಗೆರೆ ಜಿಲ್ಲೆಯಲ್ಲಿ ಮುಂಗಾರು ಮಳೆ ವಿಳಂಬ ಹಾಗೂ ಜಲಮೂಲಗಳು ಬತ್ತುತ್ತಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶದ ಕುಡಿಯುವ ನೀರಿನ ಸಮಸ್ಯೆ ನೀಗಿಸಲು ರಾಜ್ಯ ಸರ್ಕಾರದಿಂದ ೧ ಕೋಟಿ ರೂಪಾಯಿ ತುರ್ತು ಅನುದಾನ ಬಿಡುಗಡೆಯಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ತಿಳಿಸಿದ್ದಾರೆ. ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಈ ಮೊತ್ತವನ್ನು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಹಂಚಿಕೆ ಮಾಡಲಾಗಿದ್ದು, ಜನ-ಜಾನುವಾರುಗಳಿಗೆ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಲು ಸೂಚಿಸಲಾಗಿದೆ ಎಂದು ಹೇಳಿದ್ದಾರೆ. ಒಂದು ಕೋಟಿ ರೂಪಾಯಿ ಅನುದಾನದಲ್ಲಿ ಸಾಮಾನ್ಯ ವರ್ಗಕ್ಕೆ ೭೫ ಲಕ್ಷ, ಪರಿಶಿ? ಜಾತಿಗೆ ೧೭ ಲಕ್ಷ ಹಾಗೂ ಪರಿಶಿ? ಪಂಗಡಕ್ಕೆ ೭ ಲಕ್ಷ ರೂಪಾಯಿ ಮೀಸಲಿಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕುಡಿಯುವ ನೀರಿನ ತುರ್ತು ಕಾಮಗಾರಿಗಳ ಅನು?ನದಲ್ಲಿ ಅಕ್ರಮ ಎಸಗುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು. ಈಗಾಗಲೇ ಹೆಚ್ಚಿನ ಅನುದಾನಕ್ಕೆ ಬೇಡಿಕೆ ಇಟ್ಟಿದ್ದ ಮೂವರು ಅಧಿಕಾರಿಗಳಿಗೆ ನೋಟಿಸ್ ನೀಡಲಾಗಿದೆ ಎಂದು ತಿಳಿಸಿದ್ದಾರೆ.

<><><><>

ರಾಜ್ಯದ ಕೆಲವೆಡೆ ಇಂದಿನಿಂದ ಮುಂದಿನ ಒಂದು ವಾರ ಸಾಧಾರಣ ಮಳೆಯಾಗುವ ಕುರಿತು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ೨೦ ಜಿಲ್ಲೆಗಳಿಗೆ 'ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಕರಾವಳಿಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಸ್ಥಳಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡಿನ ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು ಜಿಲ್ಲೆಯ ಸ್ಥಳದಲ್ಲಿ ಮಳೆಯಾಗುವ ಸಂಭವವಿದೆ ಎಂದು ಇಲಾಖೆ ತಿಳಿಸಿದೆ. ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳ ಕೆಲವೆಡೆ ನಾಳೆ, ನಾಡಿದ್ದು, ಬಿರುಗಾಳಿ ಸಹಿತ ಮಳೆ ಸುರಿಯುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>